S. C. No.36 /2014
PW.01

# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ

## ಉತ್ತರ ಕನ್ನಡ : ಕಾರವಾರ

**ಎಸ್.ಸಿ. ನಂ. 36/2014**

**ಪ್ರಾ.ಸಾ. : 01**

**ದಿನಾಂಕಃ 05-08-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಪಾಟೀ ಸವಾಲುಃ ಆರೋಪಿ ಪರ ಶ್ರೀ ಎ.ಎ.ಎ. ವಕೀಲರಿಂದ**

10. ನಾನು ವಿಧಿ ವಿಜ್ಞಾನವನ್ನು (Forensic science) ಅಭ್ಯಾಸ ಮಾಡಿಲ್ಲ ಎಂದರೆ ಸರಿ. ಸಾಮಾನ್ಯವಾಗಿ ಯಾವುದೇ ಒಂದು ಗಾಯವನ್ನು ನೋಡಿದರೆ ಯಾವುದರಿಂದ ಗಾಯವಾಗಿದೆ ಎಂದು ತಿಳಿದು ಬರುವುದಿಲ್ಲ ಎಂದರೆ ಸರಿಯಲ್ಲ. ನಾನು ಮೃತ ವೇಲುನ ಮನೆಯ ಹತ್ತಿರ ಪಂಚನಾಮೆಗೆ ಹೋದಾಗ ಅಲ್ಲಿನ ಜನರೊಂದಿಗೆ ಮಾತನಾಡಿರುತ್ತೇನೆ ಹಾಗೂ ಶವವಗಳನ್ನು ಚಾಸಾ-1 ರವರು ಮೊದಲ ಬಾರಿಗೆ ನೋಡಿರುತ್ತಾರೆ ಎಂದು ತಿಳಿದು ಬಂದಿರುತ್ತದೆ. ನಾನು ಸ್ಥಳಕ್ಕೆ ಹೋಗುವ ಮೊದಲು ಎಷ್ಟು ಜನರು ಶವಗಳನ್ನು ನೋಡಿದ್ದರು ಎಂದರೆ ಸಾಕ್ಷಿಯು ಸುಮಾರು ಜನರು ನೋಡಿರುತ್ತಾರೆ ಎಂದು ನುಡಿಯುತ್ತಾರೆ. ಪಂಚನಾಮೆಯ ಕಾಲಕ್ಕೆ ರಕ್ತ ತಾಗಿದ ಸಿಮೆಂಟ ಚೂರು, ರಕ್ತ ಚಿಮ್ಮಿದ್ದ ಎಲೆ, ರಕ್ತ ಮಿಶ್ರಿತ ಮಣ್ಣನ್ನು ಜಪ್ತುಪಡಿಸಿಕೊಂಡ ಬಗ್ಗೆ ಪಂಚನಾಮೆಯ ಯಾವ ಪುಟದಲ್ಲಿ ಬರೆದಿದ್ದಾರೆ ಎಂದು ನನಗೆ ಹೇಳಲಾಗುವುದಿಲ್ಲ ಹಾಗೂ ಪಂಚನಾಮೆಯಲ್ಲಿ ಏನೇನು ಬರೆಯಲಾಗಿದೆ ಎಂದು ನನಗೆ ಹೇಳಲಾಗುವುದಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಘಟನೆ ನಡೆದು ಸುಮಾರು 10 ವರ್ಷಗಳ ಆಗಿರುವುದರಿಂದ ಈಗ ಹೇಳಲು ನನಗೆ ನೆನಪಿರುವುದಿಲ್ಲ ಎಂದು ನುಡಿಯುತ್ತಾರೆ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ವಿಷಯಗಳನ್ನು ಪೋಲಿಸರು ಹೇಳಿದಂತೆ ನುಡಿದಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ನಕಾಶೆ ತಯಾರಿಸಿಲ್ಲ, ಪೋಟೋ ತೆಗೆದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ನನ್ನ ಸಮಕ್ಷಮ ಯಾವುದೇ ಶವ ಪಂಚನಾಮೆಯನ್ನು ಮಾಡಿಲ್ಲ ಹಾಗೂ ಯಾವುದೇ ಪೋಟೋ ತೆಗೆದಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಯ ಕಾಲಕ್ಕೆ ನಾನು ಸ್ಥಳದಲ್ಲಿ ಹಾಜರಿಲ್ಲದೇ ಇದ್ದರೂ ಸಹ ಪೋಲಿಸರ ಮಾತು ಕೇಳಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

S. C. No.36 /2014
PW.01

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

ಸಹಿ ಇದೆ/-

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ